## ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಹಾಗೂ ಪ್ರ.ದ. ನ್ಯಾ ದಂಡಾಧಿಕಾರಿಗಳ ನ್ಯಾಯಾಲಯ, ಕುಮಟಾ

**ಸಿ.ಸಿ.ನಂ.632/2024**

ಸಿ.ಡಬ್ಲ್ಯು 23

ಪಿ.ಡಬ್ಲ್ಯು 08

ಸಾಕ್ಷಿದಾರರ ಹೆಸರು - **ನಾಗೇಶ ಕಡಬಾ ಗೌಡಾ**

ತಂದೆಯ ಹೆಸರು - ಕಡಬಾ ಗೌಡಾ

ವಯಸ್ಸು - 61 ವರ್ಷ

ಉದ್ಯೋಗ -**ನಿವೃತ್ತ ಸಹಾಯಕ ಪೊಲೀಸ ಉಪ ನಿರೀಕ್ಷಕರು,**

ವಾಸ್ತವ್ಯ - ಬೆಲೆಹಿತ್ತಲ ಗೋಕರ್ಣ

(ಇಂದು ದಿನಾಂಕಃ **22-12-2025** ರಂದು ಸತ್ಯಪ್ರತಿಜ್ಞೆಯ ಮೇರೆಗೆ ಪ್ರಮಾಣವಚನ ಬೋಧಿಸಲಾಯಿತು.)

**ಮುಖ್ಯ ವಿಚಾರಣೆ – ಮಾನ್ಯ ಸಹಾಯಕ ಸರಕಾರಿ ಅಭಿಯೋಜಕರವರಿಂದ**

ನಾನು **2018 ರಿಂದ 2024** ರವರೆಗೆ ಗೋಕರ್ಣ ಪೊಲೀಸ್ ಠಾಣೆಯಲ್ಲಿ ***ಸಹಾಯಕ ಪೊಲೀಸ್ ನಿರೀಕ್ಷಕರಾಗಿ*** ಕರ್ತವ್ಯ ನಿರ್ವಹಿಸಿರುತ್ತೇನೆ.

ದಿಃ 25-11-2023 ರಂದು ಗೋಕರ್ಣ ದಲ್ಲಿ ಠಾಣಾ ಕರ್ತವ್ಯದಲ್ಲಿದ್ದಾಗ ಚಾ.ಸಾ.1 ರವರು 16.00 ಗಂಟೆಗೆ ನೀಡಿದ ಗಣಕೀಕೃತ ದೂರಿನೊಂದಿಗೆ ನಿಪಿ 1 ನ್ನು ಹಾಗು ಈ ಪ್ರಕರಣದಲ್ಲಿ ವಶಪಡಿಸಿಕೊಂಡ ಮುದ್ದೇಮಾಲುಗಳನ್ನು ಹಾಜರುಪಡಿಸಿದ್ದು, ಅದನ್ನು ಪಡೆದುಕೊಂಡು ಠಾಣೆಗೆ ಬಂದು ಠಾಣಾ ಗುನ್ನಾ ಸಂಖ್ಯೆ 102/2023 ರ ರೀತ್ಯಾ ಪ್ರಕರಣವನ್ನು ದಾಖಲಿಸಿಕೊಂಡು, ಪ್ರಥಮ ವರ್ತಮಾನ ವರದಿಯನ್ನು ನೋಂದಾಯಿಸಿ ಮಾನ್ಯ ನ್ಯಾಯಾಲಯಕ್ಕೆ ಮತ್ತು

ಮೇಲಾಧಿಕಾರಿಗಳಿಗೆ ನಿವೇದಿಸಿಕೊಂಡಿರುತ್ತೇನೆ. ಸಾಕ್ಷಿಯು **ದೂರನ್ನು** ನೋಡಿ ಗುರುತಿಸಿದ್ದು ಅದನ್ನು ಈಗಾಗಲೇ **ನಿ.ಪಿ.4 ಎಂದು** ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು **ನಿಪಿ 4ಬಿ ಎಂದು** ಗುರುತಿಸಲಾಯಿತು. ಸಾಕ್ಷಿಯು **ಪ್ರಥಮ ವರ್ತಮಾನ ವರದಿ**ಯನ್ನು ನೋಡಿ ಗುರುತಿಸಿದ್ದು, ಪ್ರಥಮ ವರ್ತಮಾನ ವರದಿಯನ್ನು **ನಿ.ಪಿ.9 ಎಂದು**, ಅದರಲ್ಲಿರುವ ಸಾಕ್ಷಿಯ ಸಹಿಯನ್ನು **ನಿ.ಪಿ.9(ಎ) ಎಂದು** ಗುರುತಿಸಲಾಯಿತು.

ಈ ಪ್ರಕರಣದಲ್ಲಿ ವಶಪಡಿಸಿಕೊಂಡ ಸ್ವತ್ತುಗಳನ್ನು ಠಾಣಾ ಸ್ವತ್ತು ಪಟ್ಟಿ ಸಂಖ್ಯೆ 55/2023 ರಂತೆ ಮಾನ್ಯ ನ್ಯಾಯಾಲಯಕ್ಕೆ ನಿವೇದಿಸಿಕೊಂಡಿರುತ್ತೇನೆ.

ಸಾಕ್ಷಿಯು ನ್ಯಾಯಾಲಯದ ಮುಂದೆ ಇರುವ ಮು.ಮಾ.1 ರಿಂದ 3 ನ್ನು ನೋಡಿ ಗುರುತಿಸಿರುತ್ತಾರೆ.

ಕಡತವನ್ನು ಮುಂದಿನ ತನಿಖೆಗಾಗಿ ಚಾಸಾ 24 ರವರಿಗೆ ವಹಿಸಿರುತ್ತೇನೆ.

**<u>ಪಾಟೀ ಸವಾಲು –ಆರೋಪಿ ಪರ ಶ್ರೀ.ಎಸ್.ಜಿ.ಎನ್. ವಕೀಲರಿಂದ</u>**

ಚಾಸಾ 1 ರವರು ಗಣಕೀಕೃತ ದೂರನ್ನು ನನ್ನ ಮುಂದೆ ತಂದು ಹಾಜರುಪಡಿಸಿದ್ದು, ಅದನ್ನು ಎಲ್ಲಿ ಗಣಕೀಕೃತಗೊಳಿಸಿರುತ್ತಾರೆ ಎಂದು ನನಗೆ ಗೊತ್ತಿಲ್ಲ. ಅದೇ ರೀತಿಯಾಗಿ ನಿಪಿ 1 ನ್ನು ಸಹ ಎಲ್ಲಿ ಗಣಕೀಕಕೃತಗೊಳಿಸಿರುತ್ತಾರೆ ಎಂದು ನನಗೆ ಗೊತ್ತಿಲ್ಲ. ಚಾಸಾ 1 ರವರು ನಮ್ಮ ಮೇಲಾಧಿಕಾರಿಗಳು ಎಂದರೆ ಸರಿ. ಮೇಲಾಧಿಕಾರಿಳು ನೀಡಿದ ದೂರಿಗೆ ಪೂರಕವಾಗಿ ಈ ಪ್ರಕರಣವನ್ನು ದಾಖಲಿಸಿಕೊಂಡಿರುತ್ತೇನೆ ಎಂದರೆ ಸರಿ. ಈ ಪ್ರಕರಣದಲ್ಲಿ ನಾನು ಯಾವುದೇ ತನಿಖೆಯನ್ನು ಮಾಡಿಲ್ಲ ಎಂದರೆ ಸರಿ. ಆರೋಪಿತರು ನಿರಪರಾಧಿ ಎಂದು ತಿಳಿದಿದ್ದರೂ ಸಹ ನಮ್ಮ ಮೇಲಾಧಿಕಾರಿಗಳ ಒತ್ತಡಕ್ಕೆ ಮಣಿದು ಈ ಪ್ರಕರಣ ದಾಖಲು ಮಾಡಿದ್ದೇವೆ ಎಂದರೆ ಸರಿಯಲ್ಲ. ನನ್ನ ಮುಂದೆ ಯಾವುದೇ ಮುದ್ದೇಮಾಲುಗಳನ್ನು ಹಾಜರುಪಡಿಸಿಲ್ಲ ಎಂದರೆ ಸರಿಯಲ್ಲ.

ನಾನು ಪ್ರವವ ಯನ್ನು ದಾಖಲಿಸಿಕೊಂಡ ಕೂಡಲೇ ಈ ಪ್ರಕರಣದ ಮುದ್ದೇಮಾಲುಗಳನ್ನು ಚಾಸಾ 24 ರವರಿಗೆ ನೀಡಿರುತ್ತೇನೆ. ಈ ಪ್ರಕರಣದಲ್ಲಿ ನಿರ್ದಿಷ್ಟವಾದ ಕಲಂಗಳನ್ನು ದಾಖಲಿಸಬೇಕು ಎಂಬ ನಿರ್ದೇಷನ ಇತ್ತು ಎಂದರೆ ಸರಿ. ನಿಪಿ 4 ರಲ್ಲಿ ಚಾಸಾ 4 ರವರು ಕಲಂಗಳನ್ನು ಅಳವಡಿಸಿ ನನಗೆ ನೀಡಿದ್ದರು ಎಂದರೆ ಸರಿ.

**ಮರು ವಿಚಾರಣೆ – ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯಂತೆ ಬೆರಳಚ್ಚು ಮಾಡಿಸಲಾಯಿತು.)

ಓ.ಹೇ.ಕೇ. ಸರಿ ಇದೆ.

**ಸಹಿ ಇದೆ.**

ಹೆಚ್ಚುವರಿ ಪ್ರ.ದ.ನ್ಯಾ.ದಂ. ಕುಮಟಾ